**ಓ.ಎಸ್. ನಂಬರ್‌ಃ 23/2022** **ಪಿ ಡಬ್ಲೂಃ 1**

ದಿಃ 22-09-2025ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:-** ವಾದಿ ಪರ ವಕೀಲರಿಂದಃ-

ಈ ಹಿಂದೆ ನಾನು ನನ್ನ ಮುಖ್ಯ ವಿಚಾರಣೆ ನೀಡಿದ್ದು, ಈ ದಿನ ನಾನು ಈ ಕೆಳಕಂಡ ದಾಖಲೆಗಳನ್ನು ಗುರುತಿಸಿಕೊಳ್ಳುತ್ತೇನೆ.

1. ದಾವಾ ಸ್ವತ್ತಿಗೆ ಸಂಬಂಧಿಸಿದ ಕಾರಾರು ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 1 ಎಂದು ಗುರುತಿಸಲಾಯಿತು ಹಾಗೂ ಸದರಿ ದಾಖಲಾತಿಯನ್ನು ನೋಡಿ ಸಾಕ್ಷಿಯು ಅದರಲ್ಲಿರುವ 1 ನೇ ಪ್ರತಿವಾದಿರವರ ಸಹಿಯನ್ನು ನೋಡಿ ಗುರುತಿಸಿರುವುದರಿಂದ ಅದನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು ಹಾಗೂ ಸಾಕ್ಷಿದಾರರ ಸಹಿಯನ್ನು ನಿ ಪಿ 1(ಬಿ) ಎಂದು ಗುರುತಿಸಲಾಯಿತು.
2. ಸರ್ವೆ ನಂ.130 ನೇದ್ದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 2 ಎಂದು ಗುರುತಿಸಲಾಯಿತು.
3. ಸರ್ವೆ ನಂ.130 ನೇದ್ದಕ್ಕೆ ಸಂಬಂಧಿಸಿದ ಮ್ಯುಟೇಷನ್ ರಿಜಿಸ್ಟರ್ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 3 ಎಂದು ಗುರುತಿಸಲಾಯಿತು.
4. ಸರ್ವೆ ನಂ.130/2 ನೇದ್ದಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 4 ಎಂದು ಗುರುತಿಸಲಾಯಿತು.
5. ಲೀಗಲ್ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 5 ಎಂದು ಗುರುತಿಸಲಾಯಿತು.
6. ಒಂದು RPAD Cover ನ್ನು ಹಾಜರು ಪಡಿಸಿದ್ದು ಅದನ್ನು ನಿ ಪಿ 6 ಎಂದು ಗುರುತಿಸಲಾಯಿತು.

ನಾನು ಸಲ್ಲಿಸಿದ ವಾದ ಪತ್ರ ಮತ್ತು ದಾಖಲೆಗಳನ್ನು ಪರಿಗಣಿಸಿ ನಾನು ನನ್ನ ದಾವೆಯಲ್ಲಿ ಕೇಳಿದಂತೆ ದಾವೆಯನ್ನು ಡಿಕ್ರಿ ಮಾಡಲು ಪ್ರಾರ್ಥನೆ.

**ಪಾಟೀಸವಾಲು:-** ಪ್ರತಿವಾದಿ ಪರ ಶ್ರೀ ವಕೀಲರಿಂದಃ-

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟಿ ಸವಾಲಿಗೆ ಕಾಲಾವಕಾಶ ಕೋರಲಾಗಿ ಸಮಯವನ್ನು ನೀಡಿ ಮುಂದೂಡಲಾಯಿತು.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**